ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ

C.C No. 158/2017
CW- 10 PW- 7

ಹೆಸರು : ಹನುಮಂತ

ತಂದೆಯ ಹೆಸರು: ಶರಣಪ್ಪ ವಾಲಿ

ವಯಸ್ಸು : 55 ವರ್ಷ

ಉದ್ಯೋಗ : ಎ.ಎಸ್.ಐ. ಯುನಿವರ್ಸಿಟಿ ಪೋಲೀಸ್ ಠಾಣೆ

ವಾಸ ಸ್ಥಳ : ಕಲಬುರಗಿ

---

ಪ್ರಮಾಣವಚನ ಬೋಧಿಸಲಾಯಿತು. ದಿಃ 27-01-2026

ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ

ನಾನು 2015 ರಿಂದ 2020ರವರೆಗೆ ಕಾಳಗಿ ಪೋಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 23.11.2016ರಂದು ಸಂಜೆ 05.00 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ-1ರವರು ಠಾಣೆಗೆ ಹಾಜರಾಗಿ ಒಂದು ದೂರನ್ನು ನೀಡಿದ್ದು ನಾನು ಅದನ್ನು ಸ್ವೀಕರಿಸಿ ಪ್ರ.ವರ್ತಮಾನ ವರದಿಯನ್ನು ದಾಖಲಿಸಿಕೊಂಡಿರುತ್ತೇನೆ. ನಾನು ದಾಖಲಿಸಿಕೊಂಡ ಪ್ರ.ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಯಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಮುಂದಿನ ತನಿಖೆಯನ್ನು ಚಾಸಾ- 11ರವರಿಗೆ ಹಸ್ತಾಂತರಿಸಿರುತ್ತೇನೆ.

ನಾನು ದಾಖಲಿಸಿದ ಪ್ರ.ವರ್ತಮಾನ ವರದಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ಗುರುತಿಸಿದ ಪ್ರ.ವರ್ತಮಾನ ವರದಿಯನ್ನು ನಿಪಿ- 3 ಎಂದು ಗುರುತಿಸಲಾಯಿತು. ನಿಪಿ-3ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-3ಎ ಎಂದು ಗುರುತಿಸಲಾಯಿತು. ನಾನು ಸ್ವೀಕರಿಸಿದ ದೂರನ್ನು ನೋಡಿದರೆ ಗುರುತಿಸುತ್ತೇನೆ. ಅದು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1ಬಿ ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ ಶ್ರೀ.ಪಿ.ಸಿ.ಎ. ವಕೀಲರಿಂದ

ನೀವು ಹೇಳುವಂತೆ ಚಾಸಾ-1ರವರು ಎಂದಿಗೂ ಠಾಣೆಗೆ ಬಂದು ಯಾವುದೇ ದೂರು ನೀಡಿಲ್ಲ ಎಂದರೆ ಸರಿಯಲ್ಲ. ನೀವು ಯಾವುದೇ ದೂರನ್ನು ಸ್ವೀಕರಿಸಿ ಪ್ರ.ವರ್ತಮಾನ ವರದಿಯನ್ನು ದಾಖಲಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ-1ರವರು ಸರಕಾರಿ ಕೆಲಸಗಾರರಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು,

ಚಿತ್ತಾಪೂರ.